ಸಮಾಚಾರ ಸಣ್ಣದಲ್ಲ

ಕಾಂಗ್ರೆಸ್‌ನವರು ತಾಳ್ಮೆಯಿಂದಿರಬೇಕು

ಬೆಂಗಳೂರು: ರಾಜ್ಯ ಕಾಂಗ್ರೆಸ್ ನಾಯಕರು ಸ್ವಲ್ಪ ತಾಳ್ಮೆಯಿಂದ ಇದ್ದರೆ ಕೇಂದ್ರ ಸರಕಾರದಿಂದ ನ್ಯಾಯಯುತ ಪರಿಹಾರ ಬಿಡುಗಡೆಯಾಗುತ್ತದೆ ಎಂದು ಬಿಜೆಪಿ ಕೇಂದ್ರ ಸಂಸದೀಯ ಮಂಡಳಿ ಸದಸ್ಯರೂ ಆಗಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ.

ಕೇಂದ್ರದಿಂದ ಬರ ಪರಿಹಾರಕ್ಕಾಗಿ ಕಾಂಗ್ರೆಸ್ ನಡೆಸುತ್ತಿರುವ ಪ್ರತಿಭಟನೆಗೆ ಸಂಬಂಧಿಸಿದಂತೆ ಸುದ್ದಿಗಾರರೊಂದಿಗೆ ಮಾತನಾಡಿ, ಕರ್ನಾಟಕ ಸೇರಿ ಎಲ್ಲ ರಾಜ್ಯಗಳಿಗೂ ಕೇಂದ್ರ ಸರಕಾರ ನ್ಯಾಯಬದ್ಧವಾಗಿ ಪರಹಾರ ಕೊಡಲಿದೆ. ಈ ಬಗ್ಗೆ ಪ್ರಧಾನಿ ನರೇಂದ್ರ ಮೋದಿಯವರು ಬಹಳ ಸ್ಪಷ್ಟವಾಗಿ ಹೇಳಿದ್ದಾರೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸಹ ಇದನ್ನೇ ಹೇಳಿದ್ದಾರೆ. ಕಾಂಗ್ರೆಸ್‌ನವರು ಸ್ವಲ್ಪ ತಾಳ್ಮೆಯಿಂದ ಇದ್ದರೆ, ಹಣವೂ ಬಿಡುಗಡೆ ಆಗುತ್ತದೆ, ಕೆಲಸ ಸಹ ಮಾಡಬಹುದು. ರಾಜ್ಯದಲ್ಲಿ ಬರಗಾಲ ಇರುವುದು ನಿಜ. ಇಂತಹ ಭೀಕರ ಬರಗಾಲ ಇದ್ದಾಗ ಸಹಜವಾಗಿ ಪರಿಹಾರ ಕೊಡುತ್ತಾರೆ. ಚುನಾವಣೆ ಇರುವುದರಿಂದ ಪರಿಹಾರ ಬರುವುದಕ್ಕೆ ಸ್ವಲ್ಪ ವಿಳಂಬ ಆಗಬಹುದು ಅಷ್ಟೇ. ಪರಿಹಾರ ತರಲು ನಾವೂ ಪ್ರಯತ್ನ ಮಾಡುತ್ತೇವೆ ಎಂದು ಹೇಳಿದರು.

ಮೊದಲ ಹಂತದ ಬಳಿಕ ಮೋದಿ ಮಾತು ಬದಲು

ಕಲಬುರಗಿ: ಮೊದಲ ಹಂತದ ಲೋಕಸಭೆ ಚುನಾವಣೆಯಲ್ಲಿ ನಿರೀಕ್ಷೆಗೆ ತಕ್ಕಂತೆ ಮತ ಬಂದಿಲ್ಲ ಎಂದು ಮನವರಿಕೆಯಾದ ನಂತರ ಪ್ರಧಾನಿ ನರೇಂದ್ರ ಮೋದಿ ಅವರ ಮಾತಿನ ಶೈಲಿಯೇ ಬದಲಾಗಿದೆ. ಆದರೂ ಕೂಡಾ ಚುನಾವಣಾ ಆಯೋಗ ಯಾವುದೇ ಕ್ರಮ ಜರುಗಿಸುತ್ತಿಲ್ಲ ಸಚಿವ ಪ್ರಿಯಾಂಕ್ ಖರ್ಗೆ ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಕಳೆದ ಮೂರು ದಿನಗಳ ಹಿಂದೆ ರಾಜಸ್ಥಾನದಲ್ಲಿ ಚುನಾ ವಣೆ ಭಾಷಣ ಮಾಡಿದ ಮೋದಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಹಿಳೆಯರ ಮಂಗಲಸೂತ್ರ, ಕಿತ್ತು ಮುಸ್ಲಿಮರ ಕೈಗೆ ಕೊಡುತ್ತದೆ ಎಂದು ಹೇಳಿದ್ದಾರೆ. ಅವರ ಹೇಳಿಕೆಗಳು ಹತಾಶರಾಗಿರುವುದು ತೋರಿಸು ವುದರ ಜತೆಗೆ ಪ್ರಧಾನಿ ಹುದ್ದೆಯ ಘನತೆಗೆ ಕುಂದು ಉಂಟಾಗುವಂತೆ ಇವೆ. ಮೋದಿಯವರ ಹೇಳಿಕೆ ಬಂದು ಮೂರು ದಿನವಾಗಿ ಕನಿಷ್ಠ 20 ಸಾವಿರ ಜನರು ಸಹಿ ಹಾಕಿರುವ ದೂರನ್ನು ಸಲ್ಲಿಸಲಾಗಿದೆ. ಕಾಂಗ್ರೆಸ್ ನಾಯಕರ ಮೇಲೆ ತಕ್ಷಣವೇ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಳ್ಳುವ ಚುನಾವಣಾ ಆಯೋಗ ಈಗ ನಿದ್ದೆ ಮಾಡುತ್ತಿದೆಯಾ.? ಅಥವಾ ಸತ್ತಿದೆಯಾ?. ಆಯೋ ಗವೂ ಕೂಡಾ ಬಿಜೆಪಿ ಮುಂಚೂಣಿ ಘಟಕ ದಂತೆ ಕಾಣುತ್ತಿದೆ ಹಾಗಾಗಿ ಬೋರ್ಡ್ ಬದಲಿಸಲಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ದಾಖಲೆ ಇಲ್ಲದ 23 ಲಕ್ಷ ನಗದು ವಶ

ಬಳ್ಳಾರಿ: ಬಳ್ಳಾರಿಯ ಆಭರಣದಂಗಡಿ ಮಾಲೀಕರೊಬ್ಬರ ಮನೆ ಮೇಲೆ ಮಂಗಳವಾರ ರಾತ್ರಿ ದಾಳಿ ನಡೆಸಿರುವ ಪೊಲೀಸರು 23 ಲಕ್ಷ ಹಣ, ಚಿನ್ನ,ಬೆಳ್ಳಿಯ ವಸ್ತುಗಳನ್ನು ವಶಕ್ಕೆ ಪಡೆದಿದ್ದಾರೆ. ಖಚಿತ ಮಾಹಿತಿ ಆಧರಿಸಿ ಚುನ್ನಿಲಾಲ್ ರಾಕೇಶ್ ಕುಮಾರ್ ಷಾ ಜ್ಯೂವೆಲರ್ಸ್ ಮಾಲೀಕ ಕಮಲೇಶ್ ಜೈನ್ ಅವರ ಕಂಬಳಿ ಬಜಾರ್‌ನ ಮನೆ ಮೇಲೆ ದಾಳಿ ನಡೆಸಲಾಗಿತ್ತು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುರ್ಮಾ ಬಂಡಾರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮನೆಯಲ್ಲಿ ತಪಾಸಣೆ ನಡೆಸಿದಾಗ ಸೂಕ್ತ ದಾಖಲೆಗಳು ಇಲ್ಲದ ಅಂದಾಜು 23,00,000 ನಗದು, 450 ಬಂಗಾರದ ವಸ್ತುಗಳು, 13 ಕೆ.ಜಿ. ಬೆಳ್ಳಿ ಪತ್ತೆಯಾದವು. ಲೋಕಸಭಾ ಚುನಾವಣೆಯಲ್ಲಿ ಇವು ಬಳಕೆಯಾಗುವ ಸಾಧ್ಯತೆಗಳಿದ್ದವು ಎಂದು ಅವರು ತಿಳಿಸಿದ್ದಾರೆ. ವಶಕ್ಕೆ ಪಡೆದಿರುವ ಹಣ ಮತ್ತು ಚಿನ್ನ,ಬೆಳ್ಳಿಯ ವಸ್ತುಗಳನ್ನು ಮುಂದಿನ ವಿಚಾರಣೆಗಾಗಿ ವಾಣಿಜ್ಯ ತೆರಿಗೆ ಅಧಿಕಾರಿಗಳಿಗೆ ಹಸ್ತಾಂತರಿಸಲಾಗಿದೆ ಎಂದು ಅವರು ಹೇಳಿದ್ದಾರೆ.



ಫನ್‌ತರಂಗ

– ರಘುಪತಿ ಶೃಂಗೇರಿ –

ಚೊಂಬಿನ ರಾಜಕೀಯ

ಯಾರ ಮಾಂಗಲ್ಯ ಕಿತ್ತಿಲ್ಲ

ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಖರ್ಗೆ ವಾಗ್ದಾಳಿ । ಮೋದಿ, ಅಮಿತ್ ಶಾರಿಂದ ದೇಶ ಮಾರಾಟ । ಪ್ರಣಾಳಿಕೆ ಕುರಿತು ಚರ್ಚೆಗೆ ಆಹ್ವಾನಿಸಿದ ಖರ್ಗೆ

ವಿಶ್ವವಾಣಿ ಸುದ್ದಿಮನೆ ಕಲಬುರಗಿ

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಮಹಿಳೆಯರ ಮಾಂಗಲ್ಯ ಸೂತ್ರ ಕಿತ್ತುಕೊಳ್ಳುತ್ತದೆ ಎಂದು ಹೇಳಿರುವ ಪ್ರಧಾನಿ ಮೋದಿ ಅವರಿಗೆ ನಾಚಿಕೆಯಾಗಬೇಕು ಎಂದು ಎಐಸಿಸಿ ಅಧ್ಯಕ್ಷ, ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದರು.

ಬುಧವಾರ ಜಿಲ್ಲೆಯ ಅಫಜಲಪುರ ಪಟ್ಟಣದಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಭಾಗವಹಿಸಿ ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ಅವರ ಪರ ಮತಯಾಚಿಸಿ ಅವರು ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಮಹಿಳೆಯರ ಮಾಂಗಲ್ಯ ಸೂತ್ರ ಕಿತ್ತುಕೊಳ್ಳುತ್ತೆ ಎನ್ನುವ ಇವರೆಂತಹ ಪ್ರಧಾನಿ, ಕಾಂಗ್ರೆಸ್ ಮಹಿಳೆಯರಿಗಾಗಿ ಹಲವಾರು ಯೋಜನೆ ಜಾರಿಗೆ ತಂದಿದೆ ಹೊರತು, ಮಾಂಗಲ್ಯ ಸೂತ್ರ ಕಿತ್ತುಕೊಳ್ಳುವ ಕೆಲಸ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.

ಲೋಕಸಭೆ ಚುನಾವಣೆಗೆ ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿ ಯುವಕರಿಗೆ, ಮಹಿಳೆಯರಿಗೆ, ರೈತರಿಗೆ ಹಾಗೂ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ ಅನುಕೂಲವಾ ಗುವಂತ ಯೋಜನೆಗಳ ಭರವಸೆ ನೀಡಿದ್ದೇವೆ. ಆದರೆ, ನಮ್ಮ ಪ್ರಣಾಳಿಕೆಯನ್ನು ಮುಸ್ಲಿಂ ಲೀಗ್ ಸಿದ್ಧಾಂತ ಇದ್ದಂತೆ ಇದೆ ಎಂದು ಬಿಜೆಪಿ ಹೇಳುತ್ತಿದೆ. ಯಾರೂ ಇಂತಹ ಮಾತುಗಳನ್ನು ಆಡುವುದಿಲ್ಲ. ಆದರೆ, ಮೋದಿಗೆ ಏನಾಗಿದೆ ಎಂದು ನನಗೆ ಗೊತ್ತಿಲ್ಲ. ನಮ್ಮ ಪ್ರಣಾಳಿಕೆಯ ಬಗ್ಗೆ ಚರ್ಚೆಗೆ ಬರುವಂತೆ ಪತ್ರ ಬರೆದಿದ್ದೇನೆ. ನೋಡೋಣ ಅವರು ಬಂದರೆ ನಾನು ಚರ್ಚೆಗೆ ಸಿದ್ದ ಎಂದು ಆಹ್ವಾನವಿತ್ತರು.

ಪ್ರಧಾನಿ ಮೋದಿ ಈ ದೇಶದ ಜನರ ಪರವಾಗಿಲ್ಲ. ಮೋದಿ ಹಾಗೂ ಅಮಿತ್ ಶಾ ದೇಶವನ್ನು ಮಾರಾಟ ಮಾಡುವವರಿದ್ದಾರೆ. ಅಂಬಾನಿ, ಅದಾನಿ ಕೊಳ್ಳುವವರಿದ್ದಾರೆ ಎಂದು ಟೀಕಿಸಿದ ಖರ್ಗೆ, ದುರ್ದೈವದಿಂದಾಗಿ ಕಳೆದ ಬಾರಿ ನನಗೆ ಹಿನ್ನಡೆಯಾಯಿತು. ಇದರಿಂದ ತಾಪತ್ರಯ ಆಗಿತ್ತು. ಆಗಿದ್ದು ಆಗಿ ಹೋಗಿದೆ. ಅದನ್ನೇ ಪದೆ ಪದೇ ಹೇಳಿದರೂ ಚೆನ್ನಾಗಿರುವುದಿಲ್ಲ. ಕಳೆದ ಸಲದ ಸೋಲಿನಿಂದ ಹೊರಗೆ ಬನ್ನಿ. ಈ ಸಲ ನೀವೆಲ್ಲ ಸೇರಿ ಬಿಜೆಪಿಗೆ ಮುಖಭಂಗ ಮಾಡಿ. ಇದು ಮೋದಿಗೂ ಗೊತ್ತಾಗಲಿ ಎಂದು ಮನವಿ ಮಾಡಿದರು.



ಬುಧವಾರ ಜಿಲ್ಲೆಯ ಅಫಜಲಪುರ ಪಟ್ಟಣದಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಕಾಂಗ್ರೆಸ್ ನಾಯಕರು ಶಕ್ತಿ ಪ್ರದರ್ಶನ ನಡೆಸಿದರು.

ಭಾವುಕರಾದ ಖರ್ಗೆ

ತವರಲ್ಲಿ ಪ್ರಚಾರ ಮಾಡಿದ ಖರ್ಗೆ ಅವರು, ಭಾಷಣದ ವೇಳೆ ಭಾವುಕರಾದರು. ಕಳೆದ ಸಲದ ಸೋಲಿನ ವಿಚಾರ ಬಿಡಿ. ನಾವು ಮಾಡಿದ ಕೆಲಸಕ್ಕೆ ನೀವು ಆಶೀರ್ವಾದ ಮಾಡಿ ರಾಧಾಕೃಷ್ಣ ಅವರಿಗೆ ಗೆಲ್ಲಿಸಬೇಕು. ನೀವು ಹಾಗೆ ಮಾಡದಿದ್ದರೆ ನಿಮ್ಮ ಹೃದಯದಲ್ಲಿ ನಾನು ಇಲ್ಲ ಎಂದು ತಿಳಿದುಕೊಳ್ಳುತ್ತೇನೆ. ನಾನು ಸತ್ತರೆ ನನ್ನ ಮಣ್ಣಿಗೆ ನೀವು ಬರಬೇಕು. ನನ್ನನ್ನು ಸುಟ್ಟರೇ ಮೇಣದ ಬತ್ತಿ ಹಚ್ಚಲು ಬನ್ನಿ. ಇದಕ್ಕಿಂತ ಹೆಚ್ಚಿಗೆ ನಾನು ಹೇಳುವುದಿಲ್ಲ ಎಂದು ಮಲ್ಲಿಕಾರ್ಜುನ ಖರ್ಗೆ ಅವರು ಭಾವುಕರಾಗಿ ನುಡಿದರು. ಅಲ್ಲದೆ, ಚುನಾವಣೆಯಲ್ಲಿ ಇರುತ್ತೇನೋ ಇಲ್ಲವೋ ಗೊತ್ತಿಲ್ಲ, ಆದರೆ ರಾಜಕೀಯದಿಂದ ನಿವೃತ್ತಿಯಾಗುವುದಿಲ್ಲ ಎಂದೂ ಖರ್ಗೆ ಹೇಳಿದರು.

ಕುರುಬ,ಗೊಂಡ ,ಕುರುಬ ಕೋಲಿ ಸಮಾಜವನ್ನು ಎಸ್.ಟಿ ಸೇರಿಸಲು ಕೇಂದ್ರಕ್ಕೆ ಪ್ರಸ್ತಾವ ಕಳಿಸಲಾಗಿದೆ. ಜಾಧವ್ ಈ ಬಗ್ಗೆ ಧ್ವನಿ ಎತ್ತಿದ್ದೀರಾ? ನಮ್ಮ ಸರಕಾರ ಅಧಿಕಾರಕ್ಕೆ ಬಂದಾಗ ಈ ಸಮುದಾಯಗಳನ್ನು ಎಸ್‌ಟಿ ಸೇರಿಸುತ್ತೇವೆ.

– ಸಿದ್ದರಾಮಯ್ಯ, ಮುಖ್ಯಮಂತ್ರಿ

ಖರ್ಗೆ, ಧರ್ಮಸಿಂಗ್‌ರಿಂದಲೇ 371ಜೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ ಮಲ್ಲಿಕಾರ್ಜುನ ಖರ್ಗೆ ಹಾಗೂ ಧರ್ಮಸಿಂಗ್ ಇಲ್ಲದೇ ಹೋಗಿದ್ದರೆ ಈ ಭಾಗಕ್ಕೆ ಆರ್ಟಿಕಲ್ 371(ಜೆ) ಜಾರಿಗೆ ಬರುತ್ತಲೇ ಇರಲಿಲ್ಲ. ಕೇಂದ್ರದಲ್ಲಿ ಬಿಜೆಪಿ ಸರಕಾರ ಇದ್ದಾಗ ಅಂದಿನ ಗೃಹ ಸಚಿವರಾಗಿದ್ದ ಲಾಲ್‌ಕೃಷ್ಣ ಅಡ್ವಾನಿ ಈ ಬೇಡಿಕೆಯನ್ನು ತಿರಸ್ಕರಿಸಿದ್ದರು. ಆದರೆ, ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ಖರ್ಗೆ ಅವರು ಪ್ರಧಾನಿ ಮನಮೋಹನ್ ಸಿಂಗ್ ಅವರ ಮೇಲೆ ಒತ್ತಡ ತಂದು ಜಾರಿಗೆ ತರಲು ಶ್ರಮಿಸಿದ್ದಾರೆ. ಈ ಭಾಗದ ಜನರು ಇದನ್ನು ಮರೆಯಬಾರದು. ಈ ಸಲ ಸುಮಾರು 5 ಸಾವಿರ ಕೋಟಿ ಖರ್ಚು ಮಾಡುತ್ತಿದ್ದೇವೆ ಎಂದರು.

ಕೀಳುಮಟ್ಟದ ಹೇಳಿಕೆ ಸರಿಯಲ್ಲ: ಶೆಟ್ಟರ್

ಬೆಳಗಾವಿಯಲ್ಲಿ ಹೆಬ್ಬಾಳ್ಕರ್, ಶೆಟ್ಟರ್ ಮಾತಿನ ಸಮರ

ಬೆಳಗಾವಿ: ಲೋಕಸಭಾ ಚುನಾವಣೆ ಹತ್ತಿರ ಆಗುತ್ತಿದ್ದಂತೆ ಬಿಜೆಪಿ ಹಾಗೂ ಕಾಂಗ್ರೆಸ್ ಅಭ್ಯರ್ಥಿಗಳ ನಡುವೆ ಪರಸ್ಪರ ಮಾತಿನ ಸಮರ ಜೋರಾಗಿದೆ. ಕಾಂಗ್ರೆಸ್ ನಿಂದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ವಿರುದ್ಧ ಹರಿಹಾಯ್ದಿದ್ದು, ಇದಕ್ಕೆ ಪ್ರತ್ಯುತ್ತರವಾಗಿ ಶೆಟ್ಟರ್ ಕೂಡಾ ಹೆಬ್ಬಾಳ್ಕರ್ ಅವರಿಗೆ ಟಾಂಗ್ ನೀಡಿದ್ದಾರೆ.

ಚುನಾವಣೆಯ ಪ್ರಚಾರದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ನನ್ನ ವಿರುದ್ಧ ಕೀಳುಮಟ್ಟದ ಹೇಳಿಕೆ ನೀಡುತ್ತಿರುವುದು ಸರಿಯಲ್ಲ ಎಂದು ಬೆಳಗಾವಿ ಲೋಕಸಭಾ ಮತಕ್ಷೇತ್ರದ ಅಭ್ಯರ್ಥಿ ಜಗದೀಶ್ ಶೆಟ್ಟರ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ನಾನು ಕಾಂಗ್ರೆಸ್‌ಗೆ ರಾಜೀನಾಮೆ ನೀಡಿ ಬಂದ ಮೇಲೆ ಈ ವಿಚಾರವನ್ನು ಲಕ್ಷ್ಮೀ ಹೆಬ್ಬಾಳ್ಕರ್ ಅವರು ಹೇಳಲಿಲ್ಲ. ಈಗ್ಯಾಕೆ ಹೇಳುತ್ತಿದ್ದಾರೆ. ಚುನಾವಣೆಯ ಪ್ರಚಾರದಲ್ಲಿ ಇಷ್ಟೊಂದು ಕೀಳುಮಟ್ಟದ ಪ್ರಚಾರದ ಹೇಳಿಕೆಗೆ ನಾನು ಪ್ರತಿಕ್ರಿಯೆ ನೀಡುವುದಿಲ್ಲ ಎಂದರು.

ಕಾಂಗ್ರೆಸ್‌ನವರಿಗೆ ಜಗದೀಶ್ ಶೆಟ್ಟರ್ ಹಾಗೂ ಬಿಜೆಪಿಯ ಬಗ್ಗೆ ಮಾತನಾಡಲು ಯಾವುದೇ ವಿಷಯಗಳು ಇಲ್ಲ, ಇದು ಲೋಕಸಭಾ ಚುನಾವಣೆ ಯಾವುದೋ ಜಿಪಂ, ವಿಧಾನಸಭೆ ಚುನಾವಣೆ ಎಂದು ತಿಳಿದುಕೊಂಡಿದ್ದಾರೋ ಹೆಬ್ಬಾಳ್ಕರ್ ಎಂದು ಅರ್ಥವಾಗುತ್ತಿಲ್ಲ. ಇಂಥ ಕೀಳು ಮಟ್ಟದ ಭಾಷೆ, ಅಪ್ರಚಾರಕ್ಕೆ ನಾನು ಅಷ್ಟೊಂದು ಕೀಳುಮಟ್ಟಕ್ಕೆ ಹೋಗುವುದಿಲ್ಲ ಎಂದು ಕುಟುಕಿದರು.

ಬೆಳಗಾವಿಗೆ ಶೆಟ್ಟರ್ ಕೊಡುಗೆ ಶೂನ್ಯ

ಬಿಜೆಪಿಯಿಂದ ಅನ್ಯಾಯ ಆಗಿದೆ ಎಂದು ಶೆಟ್ಟರ್ ಕುಟುಂಬದವರು ಕಣ್ಣೀರು ಹಾಕಿ ಕಾಂಗ್ರೆಸ್ ಗೆ ಬಂದಿದ್ದರು. ಅದಾದ ನಂತರ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ನಮ್ಮ ಪಕ್ಷದ ಅಭ್ಯರ್ಥಿಯಾಗಿ ಸೋಲು ಅನುಭವಿಸಿದರು. ನಾವು ಪರಿಷತ್ ಸದಸ್ಯರನ್ನಾಗಿ ಮಾಡಿದ್ದೇವು ಇದರ ನೆನಪು ಇರಬೇಕು. ಎರಡು ತಿಂಗಳ ಹಿಂದಷ್ಟೇ ಮೋದಿ, ಯಡಿಯೂರಪ್ಪನವರನ್ನು ಹಿಗ್ಗಾಮುಗ್ಗಾ ಟೀಕಿಸುತ್ತಿದ್ದ ಜಗದೀಶ್ ಶೆಟ್ಟರ್, ಇದೀಗ ಮೋದಿ ಅವರನ್ನು ಪ್ರಧಾನಿ ಮಾಡಬೇಕು ಎಂದು ಮತ್ತೆ ಬಿಜೆಪಿಗೆ ಹೋಗಿದ್ದಾರೆ. ಅವರಿಗೆ ತಕ್ಕ ಪಾಠ ಕಲಿಸಬೇಕು. ಹೊರಗಿನ ಅಭ್ಯರ್ಥಿಯನ್ನು ತಿರಸ್ಕರಿಸಿ ಮನೆ ಮಗನನ್ನು ಗೆಲ್ಲಿಸಿ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ಗೋಕಾಕ್‌ನಲ್ಲಿ ನಡೆದ ಪುತ್ರನ ಪರ ಪ್ರಚಾರ ಸಭೆಯಲ್ಲಿ ಮಾತನಾಡಿ, ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಕುರಿತು ಆರಂಭದಿಂದಲೂ ಅವರ ಪಕ್ಷದವರೇ ವಿರೋಧ ಮಾಡುತ್ತಿದ್ದಾರೆ. ಗೋ ಬ್ಯಾಕ್ ಶೆಟ್ಟರ್ ಅಭಿಯಾನ ಮಾಡಿದವರು ಅವರ ಪಕ್ಷದವರೇ. ಅವರು ಮುಖ್ಯಮಂತ್ರಿಯಾಗಿದ್ದಾಗ, ಕೈಗಾರಿಕೆ ಸಚಿವರಾಗಿದ್ದಾಗ, ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ ಬೆಳಗಾವಿಗೆ ಅವರ ಕೊಡುಗೆ ಶೂನ್ಯ. ಅಷ್ಟೇ ಅಲ್ಲ ಪ್ರತಿ ಸಂದರ್ಭದಲ್ಲಿ ಅವರು ಹುಬ್ಬಳ್ಳಿ -ಧಾರವಾಡ ಪರವಾಗಿ ನಿಂತು ಬೆಳಗಾವಿಗೆ ಸಾಕಷ್ಟು ಅನ್ಯಾಯ ಮಾಡಿದ್ದಾರೆ ಎಂದು ಜನರೇ ಹೇಳುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಇರುವುದು ಪಿಕ್ ಪಾಕೆಟ್ ಸರಕಾರ

ಪ್ರಚಾರ ಸಭೆಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆಕ್ರೋಶ

ಹುಬ್ಬಳ್ಳಿ: ರಾಜ್ಯದಲ್ಲಿ ಇರುವುದು ಒಂದು ಪಿಕ್ ಪಾಕೆಟ್ ಸರಕಾರ. ಪ್ರತಿಯೊಬ್ಬ ವ್ಯಕ್ತಿಯಿಂದ 10000 ರು. ಸುಲಿಗೆ ಮಾಡಿ 2000 ರು. ನೀಡುತ್ತಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದರು.

ಧಾರವಾಡ ವಿಧಾನಸಭಾ ಕ್ಷೇತ್ರದ ಪುಡಕಲಕಟ್ಟಿ ಮತ್ತು ಉಪ್ಪಿನ ಬೆಟಗೇರಿ ಗ್ರಾಮಗಳಲ್ಲಿ ಬುಧವಾರ ನಡೆದ ಪ್ರಚಾರ ಸಭೆಯಲ್ಲಿ ಮಾತನಾಡಿ, ರಾಜ್ಯ ಸರಕಾರದ ವಿರುದ್ಧ ಹರಿ ಹಾಯ್ದರು. ರಾಜ್ಯ ಕಾಂಗ್ರೆಸ್ ಸರಕಾರ ಗ್ಯಾರಂಟಿ ಗ್ಯಾರಂಟಿ ಎಂದು ತನ್ನ ಬೆನ್ನು ತಾನೇ ತಟ್ಟಿಕೊಳ್ಳುತ್ತಿದೆ. ಆದರೆ ವಾಸ್ತವವೇ ಬೇರೆ, ಒಂದನ್ನು ಫ್ರೀ ಕೊಡುತ್ತಿದ್ದರೆ ಮತ್ತೊಂದರಲ್ಲಿ ಅದರ ಹತ್ತರಷ್ಟು ಜನರಿಂದ ಪೀಕುತ್ತಿದೆ ಎಂದು ಉದಾಹರಣೆ ಸಹಿತ ಹೇಳಿದರು.

200 ಯುನಿಟ್ ವರೆಗೆ ವಿದ್ಯುತ್ ಫ್ರೀ ಎನ್ನುತ್ತಾರೆ. ಯಾರಿಗೆ ಲಭ್ಯವಾಗಿದೆ?. 4.75 ರು. ಇದ್ದ ವಿದ್ಯುತ್ ದರವನ್ನು 7.25 ರು. ಹೆಚ್ಚಿಸಿದೆ. ಇನ್ನು, ರೈತರು 10000 ರು. ಪಾವತಿಸಿದರೆ ಸಾಕು ಟಿಸಿ ಕೊಡುತ್ತಿದ್ದವು. ಈಗದಕ್ಕೆ 3 ಲಕ್ಷ, 6 ಲಕ್ಷ ರು. ವಿಧಿಸಿದ್ದಾರೆ. ರೈತರಿಗೆ 1950 ರು. ಗೆ ಕೊಡುತ್ತಿದ್ದ ಸ್ಪ್ರಿಂಕ್ಲರ್ ಪೈಪ್ 4850 ರು. ಗೆ ಹೆಚ್ಚಿಸಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಕೇಂದ್ರದ ಅನೇಕ ಯೋಜನೆಗಳು ದೇಶದ ಜನರ ಸ್ವಾವಲಂಬಿ ಬದುಕಿಗೆ ದಾರಿ ದೀಪವಾಗಿವೆ. ಕಿಸಾನ್ ಸಮ್ಮಾನ್, ಆಯುಷ್ಮಾನ್, ಉಜ್ವಲ, ಸಂಜೀವಿನಿ, ಹರ್ ಘರ್, ನೆಲ- ಜಲ, ಫಸಲ್ ಬಿಮಾ ಹೀಗೆ ವಿವಿಧ ಯೋಜನೆಗಳು ಕೋಟ್ಯಂತರ ಜನರನ್ನು ತಲುಪಿವೆ. ಇನ್ನು ಇಲ್ಲಿ ಬಹುಸಂಖ್ಯಾತರಿಗೆ ರಕ್ಷಣೆಯೇ ಇಲ್ಲವಾಗಿದೆ. ದೇಶ ಮತ್ತು ಹಿಂದೂಗಳ ರಕ್ಷಣೆಗೆ ಮೋದಿ ನೇತೃತ್ವದ ಸರ್ಕಾರವನ್ನೇ ತರಬೇಕು. ಇದಕ್ಕಾಗಿ ಬಿಜೆಪಿಯನ್ನು ಬೆಂಬಲಿಸಿ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಅಮೃತ್ ದೇಸಾಯಿ, ಸೀಮಾ ಮಸೂತಿ, ಬಿಜೆಪಿ ಮಂಡಲ ಅಧ್ಯಕ್ಷ ರುದ್ರಪ್ಪ ಅರಿವಾಳ, ಪ್ರಮುಖರಾದ ನಿಜ್ಜನಗೌಡ ಪಾಟೀಲ್, ಸವಿತಾ ಅರ್ಮ ಶೆಟ್ಟಿ, ಗಂಗಾಧರ್ ಪಾಟೀಲ್ ಕುಲಕರ್ಣಿ ಹಾಗು ಬಿಜೆಪಿ-ಜೆಡಿಎಸ್ ಪಕ್ಷಗಳ ಪ್ರಮುಖರು, ಮುಖಂಡರು ಉಪಸ್ಥಿತರಿದ್ದರು.

ಧಾರವಾಡ ವಿಧಾನಸಭಾ ಕ್ಷೇತ್ರದ ಪುಡಕಲಕಟ್ಟಿ ಮತ್ತು ಉಪ್ಪಿನ ಬೆಟಗೇರಿ ಗ್ರಾಮಗಳಲ್ಲಿ ಬುಧವಾರ ನಡೆದ ಪ್ರಚಾರ ಸಭೆಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಮಾತನಾಡಿದರು.

ಹತ್ತು ಕೆಜಿ ಅಕ್ಕಿ ಬೇಕಾ.. ಬೇಡ್ವಾ..? ಅಂತಾರೆ ಸಿಎಂ ಸಿದ್ದರಾಮಯ್ಯ.. ಎಲ್ಲಿದೆ ಸ್ವಾಮಿ ನಿಮ್ಮ ಹತ್ತು ಕೆಜಿ ಅಕ್ಕಿ?. ಕೇಂದ್ರದ ಮೋದಿ ಸರಕಾರ ದೇಶದ 80 ಕೋಟಿ ಜನಕ್ಕೆ ಇವತ್ತಿಗೂ ಕೊಡುತ್ತಿದೆ 5 ಕೆಜಿ ಅಕ್ಕಿಯನ್ನು. ಅದನ್ನೇ ತಮ್ಮದೆಂದು ಸುಳ್ಳು ಪ್ರಚಾರ ಪಡೆಯುತ್ತಿದ್ದಾರೆ. ಬಹುದೊಡ್ಡ ಸುಳ್ಳುಕೋರರ ಸರಕಾರ ಇದಾಗಿದೆ.

-ಪ್ರಲ್ಹಾದ್ ಜೋಶಿ, ಸಂಸದ

ಮಲ್ಲೇಶ್‌ಬಾಬುಗೆ ದಲಿತರಿಂದ ಬೆಂಬಲ

ಕಾಂಗ್ರೆಸ್ ಅಭ್ಯರ್ಥಿ ಗೌತಮ್ ಸೋಲು ಖಚಿತ

ಕೋಲಾರ: ಕೋಲಾರ ಲೋಕಸಭಾ ಕ್ಷೇತ್ರ ಮುಂದೆ ಜನರಲ್ ಆಗಲೂಬಹುದು, ಸಿಎಂಆರ್ ಶ್ರೀನಾಥ್ ಎಂಪಿ ಆಗಬಹುದಾಗಿದ್ದು ಇದಕ್ಕಾಗಿ ಕಾಂಗ್ರೆಸ್‌ನವರು ಯಾಕೆ ಕೊರಗಬೇಕು ಎಂದು ದಲಿತ ಸಿಂಹ ಸೇನೆ ರಾಜ್ಯಾಧ್ಯಕ್ಷ ಹೂಹಳ್ಳಿ ಪ್ರಕಾಶ್ ಪ್ರಶ್ನಿಸಿದರು.

ಮೈತ್ರಿಕೂಟದ ಅಭ್ಯರ್ಥಿ ಮಲ್ಲೇಶ್ ಬಾಬುಗೆ ಬೆಂಬಲ ವ್ಯಕ್ತಪಡಿಸಿ ಪ್ರಚಾರ ನಡೆಸಿದ ಸಂದರ್ಭದಲ್ಲಿ ಮಾತನಾಡಿ, ಮಾಜಿ ಶಾಸಕ ವರ್ತೂರ್ ಪ್ರಕಾಶ್ ಅವರು ತಮ್ಮ ಚುನಾವಣಾ ಪ್ರಚಾರದಲ್ಲಿ ಮುಂದೆ ಕೋಲಾರ ಮೀಸಲು ಲೋಕಸಭಾ ಕ್ಷೇತ್ರ, ಜನರಲ್ ಆಗುವ ಸಾಧ್ಯತೆಯಿದ್ದು ಈ ಸಂಬಂಧ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಮತ್ತು ಮಾಜಿ ಸಿಎಂ ಕುಮಾರಸ್ವಾಮಿ ಅವರ ಬಳಿ ಚರ್ಚೆ ನಡೆಸಲಾಗಿದ್ದು ಅಂತಹ ಸಂದರ್ಭ ಬಂದಾಗ 100 ಕೋಟಿ ರು. ಖರ್ಚು ಮಾಡಿಯಾದರೂ ಸಿಎಂಆರ್ ಶ್ರೀನಾಥ್ ಅವರನ್ನು ಸಂಸದರನ್ನಾಗಿ ಮಾಡಲಾಗುತ್ತದೆ ಎಂದು ತಮ್ಮ ಅನಿಸಿಕೆ ವ್ಯಕ್ತಪಡಿಸಿದ್ದು ಇದರಲ್ಲಿ ದಲಿತ ವಿರೋಧಿ ನಿಲುವು ಎಲ್ಲಿದೆ ಎಂದು ಕೇಳಿದರು. ಕೋಲಾರ ಲೋಕಸಭಾ ಕ್ಷೇತ್ರದಲ್ಲಿನ ಎಡಗೈ-ಬಲಗೈ ಗಲಾಟೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೌತಮ್‌ಗೆ ಹಿನ್ನಡೆ ಆಗುವುದು ಖಚಿತವಾಗುತ್ತಿದ್ದಂತೆಯೇ ಹತಾಶರಾಗಿರುವ ಶಾಸಕ ಕೊತ್ತೂರು, ಎಂಎಲ್‌ಸಿ ಅನಿಲ್ ತಂಡದವರು ಪ್ರತಿಯೊಂದನ್ನೂ ದಲಿತರಿಗೆ ಸಮೀಕರಿಸುವ ಮೂಲಕ ಶೋಷಿತ ಸಮುದಾಯವನ್ನು ಬಿಜೆಪಿ ಮೇಲೆ ಎತ್ತಿಕಟ್ಟುವ ಹುನ್ನಾರ ನಡೆಸುತ್ತಿದ್ದು ಮತದಾರರು ಇದನ್ನು ಅರ್ಥ ಮಾಡಿಕೊಂಡು ಮೈತ್ರಿ ಕೂಟದ ಅಭ್ಯರ್ಥಿ ಮಲ್ಲೇಶ್ ಬಾಬು ಪರವಾಗಿ ಮತ ಚಲಾಯಿಸಲಿದ್ದಾರೆಂದರು.

ಎರಡು ಬಾರಿ ಸೋಲು ಕಂಡಿರುವ ಅನುಕಂಪ ಮತ್ತು ಬಿಜೆಪಿ-ಜೆಡಿಎಸ್ ಮೈತ್ರಿಯಿಂದಾಗಿ ಕೋಲಾರ ಲೋಕಸಭಾ ಕ್ಷೇತ್ರದಲ್ಲಿ ಮಲ್ಲೇಶ್ ಬಾಬು ಅವರು ಬಹುಮತದಿಂದ ಆರಿಸಿಬರಲಿದ್ದು ಈ ಮೂಲಕ ಚಿನ್ನದನಾಡು ಇಡೀ ಕರ್ನಾಟಕದಲ್ಲೇ ಮಾದರಿಯಾಗಿ ಅಭಿವೃದ್ಧಿ ಹೊಂದಲಿದೆ.

- ಹೂಹಳ್ಳಿ ಪ್ರಕಾಶ್, ದಲಿತ ಸಿಂಹ ಸೇನೆ ರಾಜ್ಯಾಧ್ಯಕ್ಷ

ಕೋಲಾರದಲ್ಲಿ ದಲಿತ ಮುಖಂಡರು ಮೈತ್ರಿ ಅಭ್ಯರ್ಥಿ ಮಲ್ಲೇಶ್ ಬಾಬು ಅವರಿಗೆ ಬೆಂಬಲ ವ್ಯಕ್ತಪಡಿಸಿದರು.

ಗೀತಾ ಅವರ ಮೇಲೆ ಟೀಕೆ ಮಾಡಲ್ಲ

ಪಕ್ಷೇತರ ಅಭ್ಯರ್ಥಿ ಕೆ.ಎಸ್ ಈಶ್ವರಪ್ಪ ಹೇಳಿಕೆ

ಶಿವಮೊಗ್ಗ: ಗೀತಾ ಶಿವರಾಜ್ ಕುಮಾರ ಅವರನ್ನು ನನ್ನ ಸಹೋದರಿ ಅಂತಾ ಹೇಳಿದ್ದೇನೆ. ವೈಯಕ್ತಿಕವಾಗಿ ಅವರ ಮೇಲೆ ಟೀಕೆ ಮಾಡಲು ನನ್ನ ಬಳಿ ಯಾವುದೇ ಅಸ್ತ್ರ ಇಲ್ಲ. ಅವರ ಬಗ್ಗೆ ವೈಯಕ್ತಿಕ ಟೀಕೆ ಮಾಡಲ್ಲ ಎಂದು ಪಕ್ಷೇತರ ಅಭ್ಯರ್ಥಿ ಕೆ.ಎಸ್.ಈಶ್ವರಪ್ಪ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಯಡಿಯೂರಪ್ಪನವರು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಜತೆ ಹೊಂದಾಣಿಕೆ ಮಾಡಿಕೊಂಡು ವಿಜಯೇಂದ್ರನನ್ನು ಗೆಲ್ಲಿಸಿಕೊಂಡರು. ಅದೇ ರೀತಿ ಲೋಕಸಭಾ ಚುನಾವಣೆಯಲ್ಲಿ ರಾಘವೇಂದ್ರ ಅವರನ್ನು ಗೆಲ್ಲಿಸುವ ಪ್ರಯತ್ನ ನಡೆಸಿದ್ದರು. ಅದಕ್ಕೆ ಕಾಂಗ್ರೆಸ್‌ನಿಂದ ಡಮ್ಮಿ ಕ್ಯಾಂಡಿಡೇಟ್ ಹಾಕಿಸಿಕೊಂಡು ಬಂದರು. ಶಿವಮೊಗ್ಗ ಕ್ಷೇತ್ರದಲ್ಲಿ ಡಮ್ಮಿ ಕ್ಯಾಂಡಿಡೇಟ್ ಹಾಕಿದ್ದಕ್ಕೆ ಆಕ್ರೋಶಗೊಂಡ ಕಾಂಗ್ರೆಸ್‌ನವರು ನನಗೆ ಬೆಂಬಲ ಕೊಟ್ಟಿದ್ದಾರೆ. ಅದರಿಂದಾಗಿ ನಾನು ಗೆಲ್ಲುತ್ತೇನೆ ಎಂದು ಹೇಳಿದ್ದೇನೆ. ಇದರಲ್ಲಿ ನಾನು ಗೀತಾ ಶಿವರಾಜ್‌ಕುಮಾರ ಅವರನ್ನು ವೈಯಕ್ತಿಕವಾಗಿ ಟೀಕಿಸಿದ್ದೇನೆ ಎಂದು ಹೇಗಾಗುತ್ತದೆ ಎಂದು ಪ್ರಶ್ನಿಸಿದರು.

ಬಿಜೆಪಿ ನನ್ನದೇ ಪಕ್ಷ. ನಾನು ತಪಸ್ಸು ಮಾಡಿ ಕಟ್ಟಿರೋದು. ನನ್ನ ಜತೆಗೆ ಡಿ.ಎಸ್. ಶಂಕರಮೂರ್ತಿ, ರಾಮಚಂದ್ರೇಗೌಡರು ಸೇರಿದಂತೆ ಇನ್ನೂ ಅನೇಕ ಹಿರಿಯರಿದ್ದಾರೆ. ಸದ್ಯ ಮೂಲೆಗೆ ತಳ್ಳಿರುವ ಸಿ.ಟಿ.ರವಿ, ಪ್ರತಾಪ್ ಸಿಂಹ, ನಳೀನ್ ಕುಮಾರ್ ಕಟೀಲ್, ಬಸನಗೌಡ ಪಾಟೀಲ್ ಯತ್ನಾಳ್, ಅನಂತ್‌ಕುಮಾರ್ ಹೆಗ್ಡೆ ಅವರು ಈ ಪಕ್ಷ ಕಟ್ಟಿದ್ದಾರೆ. ಇವರೆಲ್ಲರೂ ಬಿಜೆಪಿಯನ್ನು ತಾಯಿ ಎಂದುಕೊಂಡಿದ್ದಾರೆ. ನಾನು ಚುನಾವಣೆಯಲ್ಲಿ ಗೆದ್ದ ತಕ್ಷಣ ನನ್ನ ತಾಯಿ ಬಳಿ ಹೋಗುತ್ತೇನೆ.

- ಕೆ.ಎಸ್.ಈಶ್ವರಪ್ಪ ಮಾಜಿ ಸಚಿವ

ಮೋದಿಗೆ ಕೂಲಿ ಕೊಡುವ ಸಂದರ್ಭ

ಭದ್ರಾವತಿ: ನರೇಂದ್ರ ಮೋದಿ ಅವರು 10 ವರ್ಷಗಳಿಂದ ನಿರಂತರವಾಗಿ ಶ್ರಮಪಟ್ಟು ದೇಶದ ಜನತೆಗೋಸ್ಕರ ಕೆಲಸ ಮಾಡಿದ್ದಾರೆ. ಇದಕ್ಕೆ ಪ್ರತಿಯಾಗಿ ಈ ಬಾರಿಯ ಚುನಾವಣೆಯಲ್ಲಿ ಅವರಿಗೆ ಮತ ನೀಡಿ ಕೂಲಿ ನೀಡುವ ಸಂದರ್ಭ ಬಂದಿದೆ' ಎಂದು ತಮಿಳುನಾಡು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಅಣ್ಣಾಮಲೈ ತಿಳಿಸಿದರು. ಅವರು ಹಳೇ ನಗರದ ಕನಕ ಮಂಟಪದಲ್ಲಿ ಬುಧವಾರ ಬಿಜೆಪಿ ಪರವಾಗಿ ಮತ ಪ್ರಚಾರದ ಬೃಹತ್ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿ, ತಮಿಳಿನಲ್ಲಿ ಹೆಚ್ಚಾಗಿ ಮಾತನಾಡಿದ ಅವರು ದೇಶದ ಪ್ರಧಾನಿಯಾಗಿ ಬರಲು ಒಂದು ತಾಕತ್ತು ಬೇಕು. ಅದು ಕೇವಲ ನರೇಂದ್ರ ಮೋದಿ ಅವರಿಗೆ ಮಾತ್ರ ಇದೆ . ಕಾಂಗ್ರೆಸ್ ಪಕ್ಷದಲ್ಲಿ ಕಳೆದ 8 ತಿಂಗಳಿಂದಲೂ ಪ್ರಧಾನ ಮಂತ್ರಿ ಆಗುವ ಅಭ್ಯರ್ಥಿಯನ್ನು ಹುಡುಕುತ್ತಿದ್ದಾರೆ. ಇನ್ನೂ ನಿಗದಿಯಾಗಿಲ್ಲ ಮುಂದೆಯೂ ನಿಗದಿಯಾಗುವ ಲಕ್ಷಣಗಳು ಕಾಣುತ್ತಿಲ್ಲ. ಪ್ರಧಾನ ಮಂತ್ರಿಯಾಗಲು ಅವರ ಪಕ್ಷದಲ್ಲಿ ಎಲ್ಲರಿಗೂ ಆಸೆ ಇದೆ. ಅವರಲ್ಲಿಯೇ ಒಗ್ಗಟ್ಟಿಲ್ಲ ಎಂದರು.

ಬಿಜೆಪಿ ಪರ ಎಲ್ಲೆಡೆ ನಿರೀಕ್ಷೆ ಮೀರಿ ಬೆಂಬಲ

ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿಶ್ವಾಸ

ತುಮಕೂರು: ರಾಜ್ಯದಲ್ಲಿ ಬಿಜೆಪಿ ಪರ ವಾತಾವರಣ ತುಂಬಾ ಚೆನ್ನಾಗಿದೆ. ಎಲ್ಲೆಡೆ ನಿರೀಕ್ಷೆ ಮೀರಿ ಜನ ಬೆಂಬಲ ಸಿಗುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಮೋದಿ ಅಲೆ ಎಲ್ಲೆಡೆ ಬೀಸುತ್ತಿದೆ. ಇದೆಲ್ಲದರ ಆಧಾರದ ಮೇಲೆ ಸೋಮಣ್ಣ ಬಹಳ ಅಂತರದಿಂದ ಗೆಲ್ಲುವ ವಿಶ್ವಾಸವಿದೆ. ದೇವೇಗೌಡರು ಮತ್ತು ಪ್ರಧಾನಿ ಮೋದಿ ನಡುವಿನ ಸಂಬಂಧ ಹೇಗಿದೆ ಅನ್ನೋದು ಎಲ್ಲರಿಗೂ ಗೊತ್ತಿದೆ. ಬಿಜೆಪಿ-ಜೆಡಿಎಸ್ ಮೈತ್ರಿ ಆಗಿರೋದ್ರಿಂದ ಬಹಳ ದೊಡ್ಡ ಅಂತರದಿಂದ ಎಲ್ಲ 28 ಸ್ಥಾನಗಳನ್ನು ನಾವು ಗೆಲ್ಲುತ್ತೇವೆ. ಕಾಂಗ್ರೆಸ್‌ನವರು ತಮ್ಮ ಮುಂದಿನ ಪ್ರಧಾನಿ ಅಭ್ಯರ್ಥಿ ಯಾರು ಅಂತ ಹೆಸರು ಹೇಳಲಿ ಎಂದಿದ್ದೀನಿ. ಇವತ್ತಿನವರೆಗೂ ಅವರಿಗೆ ಹೇಳೋಕೆ ಆಗಿಲ್ಲ. ಅವರ ಸೋಲು ಖಚಿತ ಎಂದು ಹೇಳಿದರು.

ಸಂವಿಧಾನ ಬದಲಾವಣೆ ಮಾಡ್ತಾರೆ ಎಂದು ದಲಿತ ಕೇರಿಗಳಲ್ಲಿ ಪ್ರಚಾರ ಮಾಡುವುದು ಹುಚ್ಚುತನ. ಸಂವಿಧಾನವನ್ನು ಯಾರೂ ಟಚ್ ಮಾಡೋಕೆ ಆಗಲ್ಲ. ಅಂಬೇಡ್ಕರ್ ಮಾಡಿರುವುದು ಪವಿತ್ರವಾದ ಸಂವಿಧಾನ. ಅದನ್ನು ಉಳಿಸಿಕೊಂಡು ಹೋಗಬೇಕಾಗಿದೆ. ಇದೇ ಮಾತನ್ನು ಮೋದಿಯವರು ಹೇಳಿದ್ದಾರೆ. ಸುಳ್ಳು, ಅಪಪ್ರಚಾರ ಮಾಡಿದರೆ ಅದಕ್ಕೆ ಕವಡೆ ಕಾಸಿನ ಕಿಮ್ಮತ್ತಿಲ್ಲ.

- ಬಿ.ಎಸ್.ಯಡಿಯೂರಪ್ಪ ಮಾಜಿ ಸಿಎಂ

ಕ್ಷೇತ್ರಕ್ಕೆ ನೀರಾವರಿ ಯೋಜನೆ ಕಲ್ಪಿಸುವುದು ನನ್ನ ಮುಖ್ಯ ಆದ್ಯತೆ. ಕೃಷ್ಣಾ ನದಿಯಿಂದಲೂ ಕೋಲಾರ, ಚಿಕ್ಕಬಳ್ಳಾಪುರಕ್ಕೆ ನೀರು ತರಲು ಪ್ರಯತ್ನಿಸುತ್ತೇನೆ. ಜಿಲ್ಲೆಯಲ್ಲಿ ನಿರುದ್ಯೋಗ ಹೆಚ್ಚಿದ್ದು, ಬಂಗಾರಪೇಟೆ, ಕೆಜಿಎಫ್‌ನಿಂದ ನಿತ್ಯ ಸಾವಿರಾರು ಜನ ರೈಲಿನಲ್ಲಿ ಬೆಂಗಳೂರಿಗೆ ಕೆಲಸಕ್ಕೆ ಹೋಗುತ್ತಾರೆ. ಮೋದಿ ಜತೆ ದೇವೇಗೌಡರು ಉತ್ತಮ ಬಾಂಧವ್ಯ ಹೊಂದಿದ್ದು, ಅವರ ಮೂಲಕ ಈ ಕೆಲಸ ಮಾಡಿಸಿಕೊಂಡು ಬರುವ ವಿಶ್ವಾಸವಿದೆ.

-ಮಲ್ಲೇಶ್ ಬಾಬು ಮೈತ್ರಿ ಅಭ್ಯರ್ಥಿ

ಬೆಳೆ ಉಳಿಸಿಕೊಳ್ಳಲು ಪರದಾಡುತ್ತಿರುವ ಜಿಲ್ಲೆಯ ರೈತರು ನೀರು ಕೊಡಿ ಎಂದು ಕೇಳುತ್ತಿದ್ದಾರೆ. ತಮಿಳುನಾಡಿಗೆ ನಿರಂತರವಾಗಿ ನೀರು ಹರಿಸುತ್ತಿರುವ ಕಾಂಗ್ರೆಸ್ ಸರಕಾರ ಜಿಲ್ಲೆಯ ರೈತರಿಗೆ ಚೊಂಬು ಕೊಟ್ಟಿದೆ. ಮಂಡ್ಯ ಜಿಲ್ಲೆಯಲ್ಲಿ ರೈತರಿಗೆ ನೀರಿಲ್ಲ, ಬೆಂಗಳೂರಿಗೆ ಕುಡಿಯುವ ನೀರಿಲ್ಲ. ಆದರೆ ತಮಿಳುನಾಡಿನ ಸ್ಟಾಲಿನ್‌ಗೆ ನೀರು ಬಿಟ್ಟಿದ್ದಾರೆ. ದೇಶಕ್ಕಾಗಿ ಮೋದಿ, ಕಾವೇರಿಗಾಗಿ ಕುಮಾರಣ್ಣ ಎಂಬ ಘೋಷಣೆ ಜಿಲ್ಲೆಯ ರೈತರ ಮನೆಯಲ್ಲಿ ಮೊಳಗಬೇಕು.

- ಸಿ.ಟಿ.ರವಿ ಮಾಜಿ ಸಚಿವ



ಕೇಂದ್ರದಲ್ಲಿ ಹತ್ತು ವರ್ಷ ಅಧಿಕಾರ ನಡೆಸಿದ ನರೇಂದ್ರ ಮೋದಿ ಅವರ ನೇತೃತ್ವದ ಬಿಜೆಪಿ ಸರಕಾರದ ಸಾಧನೆ ಕೇವಲ ಚೊಂಬು., ಹತ್ತು ವರ್ಷ ಅಧಿಕಾರ ನಡೆಸಿದ ಬಿಜೆಪಿ ಐವತ್ತು ವರ್ಷ ದೇಶವನ್ನು ಹಿಂದಕ್ಕೆ ತೆಗೆದುಕೊಂಡು ಹೋಗಿದೆ. ಬಿಜೆಪಿ ಅಭಿವೃದ್ಧಿ ವಿಚಾರದಲ್ಲಿ ಮತ ಕೇಳುವುದಿಲ್ಲ. ಹಿಂದೂ-ಮುಸ್ಲಿಂ ಎಂದು ಜನರನ್ನು ವಿಭಜನೆ ಮಾಡಿ ಕೋಮುಭಾವನೆ ಪ್ರಚೋದಿಸಿ ಸುಳ್ಳು ಹೇಳಿ ಜನರನ್ನು ವಂಚಿಸುತ್ತಿದೆ.

- ಜಮೀರ್ ಅಹಮದ್ ಖಾನ್ ಸಚಿವ



ಪ್ರಧಾನಿ ಮೋದಿ ಅವರು ಕೊಟ್ಟ ಅನೇಕ ಯೋಜನೆಗಳ ಫಲಾನುಭವಿಗಳು ದನ್ಯವಾದ ಸಲ್ಲಿಸಲು ಕಾಯ್ತಿದ್ದಾರೆ. ನರೇಂದ್ರ ಮೋದಿ ಅವರು ಮನೆ, ರೈತರು, ಆಯುಷ್ಮಾನ್ ಭಾರತ ಎಲ್ಲ ನೀಡಿದ್ದಾರೆ. ಅವರೂ ಸಮಾರಂಭಕ್ಕೆ ಆಗಮಿಸಲಿದ್ದಾರೆ. ಜತೆಗೆ ಇದು ಇಡೀ ಕ್ಷೇತ್ರದ ಜನರು ದೊಡ್ಡ ಸಂಖ್ಯೆಯಲ್ಲಿ ಬರಲು ಇನ್ನೊಂದು ಕಾರಣವಿದೆ. ಭಾವಬಾತ್ಮಕವಾಗಿ ರಾಮಮಂದಿರ ಕಟ್ಟಿದ ಬಳಿಕ ಬಂದ ಮೊದಲ ಚುನಾವಣೆ. ಅವರಿಗೆ ಕೃತಜ್ಞತೆ ಸಲ್ಲಿಸಲಿದ್ದಾರೆ ಜನ .

-ವಿಶ್ವೇಶ್ವರ ಹೆಗಡೆ ಕಾಗೇರಿ ಬಿಜೆಪಿ ಅಭ್ಯರ್ಥಿ

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ದೇಶಾದ್ಯಂತ ಕಾಂಗ್ರೆಸ್ ಗೆಲ್ಲಲಿದೆ .ಹೋದ ಬಾರಿ ಮೋದಿ ಅಲೆ ಇತ್ತು. ಈಗ ಮೋದಿ ಅಲೆ ಬಹಳ ಕಡಿಮೆ ಇದೆ. ಬಿಜೆಪಿಯವರು ಕೊಟ್ಟ ಭರವಸೆಗಳಲ್ಲಿ ಒಂದೂ ಈಡೇರಿಸಿಲ್ಲ, ನುಡಿದಂತೆ ನಡೆದಿಲ್ಲ. ಪ್ರಧಾನಿ ಮೋದಿ ಅವರು ಕರ್ನಾಟಕಕ್ಕೆ ಬರ ಬಂದಾಗ ಎಲ್ಲಿದ್ದರು. ಪ್ರವಾಹ ಬಂದಾಗ ಎಲ್ಲಿ ಬಂದರು?. ಚುನಾವಣೆಯಲ್ಲಿ ಬಿಜೆಪಿಗೆ ಜನ ತಕ್ಕ ಪಾಠ ಕಲಿಸುತ್ತಾರೆ.

-ವಿನಯ್ ಕುಲಕರ್ಣಿ ಮಾಜಿ ಸಚಿವ